ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ಹೆಚ್ಚಾಗಿ ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.573.58 ಕೋಟಿಗಳ ಮೊತ್ತದ ಕ್ರಿಯಾ ಯೋಜನೆಗೆ ಅನುಮೋದಿಸುವ ಬಗ್ಗೆ.

ಓದಲಾಗಿದೆ: 1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆ/ಪಿಆರ್(G)/8669/2018-19, ದಿನಾಂಕ: 14-12-2018.

2. ಸರ್ಕಾರದ ಆದೇಶ ಸಂಖ್ಯೆ: ನಆಇ 375 ಎಂಎನ್‌ವೈ 2018, ದಿನಾಂಕ: 01-02-2019.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 14-12-2018ರ ಪ್ರಸ್ತಾವನೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಪಾಲಿಕೆಯ ಎಲ್ಲಾ ವಲಯಗಳಲ್ಲಿ ತಮ್ಮ ವ್ಯಾಪ್ತಿಯ ವಾರ್ಡ್‌ಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ತಪಾಸಣೆ ಕಾರ್ಯಗಳನ್ನು ಕೈಗೊಂಡು, ರೂ.573.58 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳುವ ಒಟ್ಟು 539 ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಿರುತ್ತಾರೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 01-02-2019ರ ಆದೇಶದಲ್ಲಿ 2018-19ನೇ ಸಾಲಿನಲ್ಲಿ "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆ" ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಒದಗಿಸಿರುವ ರೂ.2500 ಕೋಟಿಗಳ ಜೊತೆಯಲ್ಲಿ ರೂ.5515.37 ಕೋಟಿಗಳ ಹೆಚ್ಚುವರಿ ಅನುದಾನ ಸೇರಿದಂತೆ ಒಟ್ಟು ರೂ.8015.37 ಕೋಟಿಗಳ ಮೊತ್ತದ ಅಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿರುತ್ತದೆ.

3. ಪ್ರಸ್ತುತ ಬೆಂಗಳೂರು ನಗರವು ಸುಮಾರು 800 ಚ.ಕಿ.ಮೀ. ನಷ್ಟು ವಿಸ್ತೀರ್ಣ ಹೊಂದಿದ್ದು 13000 ಕಿ.ಮೀ. ಗಳಷ್ಟು ರಸ್ತೆ ಜಾಲವನ್ನು ಹೊಂದಿದೆ. ಬೆಂಗಳೂರು ನಗರ ಬೆಳೆದಂತೆಲ್ಲ ಜನಸಂಖ್ಯೆ ಬೆಳೆಯುತ್ತಿದ್ದು ಎಲ್ಲಾ ವರ್ಗದ ಜನಸಂಖ್ಯೆಗೆ ಅವಶ್ಯವಿರುವ ಮೂಲಭೂತ ಸೌಕರ್ಯವನ್ನು ಒದಗಿಸಬೇಕಿರುತ್ತದೆ. ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ 2013ನ್ನು ರಾಜ್ಯ ಸರ್ಕಾರವು ದಿನಾಂಕ: 20-03-2014 ರಿಂದ ಜಾರಿಗೆ ತರಲಾಗಿದ್ದು, ಅದರಂತೆ ರಾಜ್ಯ ಸರ್ಕಾರವು ಪ್ರತಿಯೊಂದು ಹಣಕಾಸು ವರ್ಷದಲ್ಲಿ, ರಾಜ್ಯ ಅನುಸೂಚಿತ ಜಾತಿಗಳು/ ಅನುಸೂಚಿತ ಪಂಗಡದ ಜನಸಂಖ್ಯೆ ಪ್ರಮಾಣಕ್ಕನುಸಾರವಾಗಿ ರಾಜ್ಯದ ಒಟ್ಟು ಯೋಜನಾ ವೆಚ್ಚದ ಒಂದು ಭಾಗವನ್ನು ಗುರುತಿಸಬಹುದಾದಂಥ ರೀತಿಯಲ್ಲಿ ಮೀಸಲಿರಿಸತಕ್ಕದ್ದು, ಅದನ್ನು ಅನುಸೂಚಿತ ಜಾತಿ ಉಪ-ಯೋಜನೆ ಹಾಗೂ ಬುಡಕಟ್ಟು ಯೋಜನೆ ನಿಧಿಯೆಂದು ಕರೆಯತಕ್ಕದ್ದು ಎಂದು ಉಲ್ಲೇಖಿಸಲಾಗಿರುತ್ತದೆ.

. . . 2 .

4. ಅದರಂತೆ, ಸರ್ಕಾರವು 2018-19ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಗಳಿಗೆ ಬೆಂಗಳೂರು ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಅನುದಾನ ಪಡಿ SCSP ಗೆ ರೂ.408.17 ಮತ್ತು TSP ಗೆ ರೂ.165.41 ಒಟ್ಟಾರೆ ರೂ.573.58 ಕೋಟಿಗಳ ಮೊತ್ತವನ್ನು ಅನುವು ಮಾಡಲಾಗಿರುತ್ತದೆ.

5. ಕಳೆದೆರಡು ದಶಕಗಳಲ್ಲಿ ಬೆಂಗಳೂರು ನಗರವು ಅಪೂರ್ವ ಬದಲಾವಣೆಯನ್ನು ಕಂಡಿದ್ದು ಪ್ರಸ್ತುತ ಏಷ್ಯಾ ಖಂಡದಲ್ಲೇ ಅತಿ ವೇಗವಾಗಿ ಬೆಳೆಯುವ ನಗರಗಳಲ್ಲೊಂದಾಗಿದೆ. ಪ್ರಸ್ತುತ ನಗರದ ಜನಸಂಖ್ಯೆಯು ಸುಮಾರು 1 ಕೋಟಿಯಷ್ಟಿದ್ದು, 50 ಲಕ್ಷ ವಾಹನಗಳಿವೆ. ಪರಿಶಿಷ್ಟ ಜಾತಿ / ಪಂಗಡದ ಜನರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಿದ್ದು, ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮದಂತೆ ಮೂಲಭೂತ ಸೌಕರ್ಯವನ್ನು ಒದಗಿಸಬೇಕಿರುತ್ತದೆ.

6. ಸರ್ಕಾರವು 2018-19ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಗಳಿಗೆ ಒಟ್ಟಾರೆ ರೂ.573.58 ಕೋಟಿಗಳ ಮೊತ್ತವನ್ನು ನಿಗಧಿಪಡಿಸಿದ್ದ ಮೇರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ವಲಯಗಳಲ್ಲಿನ ವ್ಯಾಪ್ತಿಯ ವಾರ್ಡ್‌ಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ತಪಾಸಣೆ ಕಾರ್ಯಗಳನ್ನು ಕೈಗೊಂಡು, ಬಿ.ಬಿ.ಎಂ.ಪಿ. ಆಯುಕ್ತರು ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಮೋದನೆಗೆ ಸಲ್ಲಿಸಿರುತ್ತಾರೆ.

7. ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ 2013 ರಂತೆ ಸರ್ಕಾರವು 2018-19ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಗಳಿಗೆ ಬೆಂಗಳೂರು ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಅನುದಾನದಡಿ ಒಟ್ಟಾರೆ ರೂ.573.58 ಕೋಟಿಗಳ ಮೊತ್ತವನ್ನು ನಿಗಧಿಪಡಿಸಲಾಗಿರುತ್ತದೆ.

8. ಹಂಚಿಕೆಯಾಗಿರುವ ನಿಧಿಯನ್ನು ನಿಗಧಿತ ಉದ್ದೇಶಕ್ಕೆ ಮಾತ್ರ ಬಳಸುವ ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಅಭ್ಯುದಯಕ್ಕೆ ನೇರವಾಗಿ ಬಳಕೆಯಾಗುವ ಉದ್ದೇಶದಿಂದ ಅನುಸೂಚಿತ ಜಾತಿ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆಗಳ ರಾಜ್ಯ ಯೋಜನೆಯ ಹಂಚಿಕೆಯನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಜನಸಂಖ್ಯೆಯ ಮೇಲೆ ಆಧಾರಿತವಾಗಿ ಮಾಡಲಾಗುತ್ತಿದೆ.

9. ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮ ಜಾರಿಗೆ ಬಂದ ನಂತರದಲ್ಲಿ 2014-15ನೇ ಸಾಲಿನಿಂದ 2017-18ನೇ ಸಾಲಿನವರೆಗೂ ವಿವಿಧ ಯೋಜನೆ ಮತ್ತು ಅನುದಾನಪಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ರಾಜ್ಯ ಸರ್ಕಾರರಿಂದ ಅನುದಾನವನ್ನು ಒದಗಿಸಲಾಗುತ್ತಿದ್ದು, ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮದಂತೆ ಪರಿಶಿಷ್ಟ ಜಾತಿ/ಪಂಗಡದ ಜನರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಪ್ರತ್ಯೇಕವಾಗಿ ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ.

...3.

10. ಪ್ರಸ್ತುತ ಬೆಂಗಳೂರಿನ ಜನಸಂಖ್ಯೆ ಸುಮಾರು ಒಂದು ಕೋಟಿಯಷ್ಟಿದ್ದು, ಪರಿಶಿಷ್ಟ ಜಾತಿ/ಪಂಗಡದ ಜನರ ಸಂಖ್ಯೆಯು ಸಹ ಅಧಿಕವಾಗಿರುತ್ತದೆ. ಪರಿಶಿಷ್ಟ ಜಾತಿ/ಪಂಗಡದ ಜನರ ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಿರುತ್ತದೆ. ದಿನಾಂಕ: 28–09–2018 ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಅನುಸೂಚಿತ ಜಾತಿಗಳ/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ವಿಶೇಷ ಮೂಲಭೂತ ಸೌಕರ್ಯಕ್ಕೆ ಸರೋವರ ಅಭಿವೃದ್ಧಿ ಯೋಜನೆ ಅಡಿ ಕೈಗೊಳ್ಳುವ ಕಾರ್ಯಕ್ರಮಗಳಿಗೆ ಡೀಮ್ಡ್ ವೆಚ್ಚವೆಂದು ಒಟ್ಟು ಮೊತ್ತ ರೂ.573.58 ಕೋಟಿಗಳ ಮೊತ್ತವನ್ನು ಉಪಯೋಗಿಸಲು ಚರ್ಚಿಸಲಾಗಿದ್ದು, ಅಂತಿಮವಾಗಿ ಬೆಂಗಳೂರು ನಗರದಲ್ಲಿ ಪರಿಶಿಷ್ಟ ಜಾತಿ/ಪಂಗಡದ ಜನರು ಹೆಚ್ಚಾಗಿ ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮಾತ್ರ ಉಪಯೋಗಿಸುವುದೆಂದು ಒಪ್ಪಿಗೆ ನೀಡಲಾಗಿರುತ್ತದೆ.

11. ದಿನಾಂಕ: 04–02–2019 ರಂದು ಮಾನ್ಯ ಉಪ ಮುಖ್ಯಮಂತಿಗಳ ಅಧ್ಯಕ್ಷತೆಯಲ್ಲಿ, ಮಾನ್ಯ ಸಮಾಜ ಕಲ್ಯಾಣ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಸಭೆ ನಡೆಸಿ SCSP ಗೆ ಮತ್ತು TSP ಗೆ ನೀಡಿರುವ ಅನುದಾನದ ಮೊತ್ತವನ್ನು ಡೀಮ್ಡ್ ವೆಚ್ಚ ಎಂದು ಪರಿಗಣಿಸಲು ಒಪ್ಪದೇ, ಬೆಂಗಳೂರು ನಗರದಲ್ಲಿ ಪರಿಶಿಷ್ಟ ಜಾತಿ/ಪಂಗಡದ ಜನರು ಹೆಚ್ಚಾಗಿ ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮಾತ್ರ ಉಪಯೋಗಿಸುವುದೆಂದು ಒಪ್ಪಿಗೆ ನೀಡಲಾಗಿರುತ್ತದೆ. ಅನುಮೋದಿತ ರೂ.8015.37 ಕೋಟಿಗಳ ಡೀಮ್ಡ್ ವೆಚ್ಚದ ಮೊತ್ತವನ್ನು ಮಾನ್ಯ ಉಪ ಮುಖ್ಯಮಂತ್ರಿಗಳ ವಿವೇಚನೆಗೆ ನೀಡಲು ಸಭೆಯಲ್ಲಿ ತೀರ್ಮಾನಿಸಲಾಗಿದೆ. ಈ ಬಗ್ಗೆ ಸದರಿ ವೆಚ್ಚದ 10% ಮೊತ್ತವನ್ನು ಡೀಮ್ಡ್ ವೆಚ್ಚವೆಂದು ಮಾನ್ಯ ಉಪ ಮುಖ್ಯಮಂತ್ರಿಗಳು ತೀರ್ಮಾನಿಸಿರುತ್ತಾರೆ.

12. ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ನಅಇ 648 ಎಂಎನ್‌ವೈ 2018,
ಬೆಂಗಳೂರು, ದಿನಾಂಕ: 31–05–2019.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ಹೆಚ್ಚಾಗಿ ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು SCSP ಮತ್ತು TSP ಗೆ ರೂ.573.58 ಕೋಟಿಗಳ ಮೊತ್ತಕ್ಕೆ ಸಂಬಂಧಿಸಿದಂತೆ ಆದೇಶದ ಅನುಬಂಧದಲ್ಲಿನ ಒಟ್ಟು 539 ಕಾಮಗಾರಿಗಳ ಕ್ರಿಯಾ ಯೋಜನೆಗಳಿಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೆ ಒಳಪಟ್ಟು ಕೆಳಕಂಡಂತೆ ಸರ್ಕಾರದ ಅನುಮೋದನೆ ನೀಡಿದೆ.

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರು ಹೆಚ್ಚಾಗಿ ವಾಸಿಸುತ್ತಿರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಗಳನ್ನು ಕಲ್ಪಿಸಲು 2018–19ನೇ ಸಾಲಿನಲ್ಲಿ ರೂ.8015.37 ಕೋಟಿಗಳ ಅನುದಾನದಲ್ಲಿ ಅನುಮೋದಿಸಿರುವ ಕ್ರಿಯಾ ಯೋಜನೆಯಲ್ಲಿನ ರೂ.573.58 ಕೋಟಿಗಳ ಕಾಮಗಾರಿಗಳನ್ನು ಕೈಬಿಟ್ಟು ರೂ.573.58 ಕೋಟಿಯ ಎಸ್.ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ. ಕ್ರಿಯಾ ಯೋಜನೆ ಕಾಮಗಾರಿಗಳನ್ನು ಅಳವಡಿಸಿಕೊಳ್ಳಲು ಅನುಮೋದನೆ ಮತ್ತು ಎಸ್.ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ. ಅನುದಾನದ ಪೈಕಿ ರೂ.801.53 ಕೋಟಿಗಳನ್ನು ಡೀಮ್ಡ್ ಖರ್ಚು ಎಂದು ಪರಿಗಣಿಸಲು ಮತ್ತು ಉಳಿಕೆ ರೂ.556.00 ಕೋಟಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಒದಗಿಸಲು ಅನುಮೋದನೆ ನೀಡಿದೆ.

. . . 4 .

66	Improvements to roads and drains of Mother teresa road in Mariyannapalya in Ward No.7 Byatarayanapura	75.00
67	Improvements to roads and drains of Mariyannapalya and surrounding areas in Ward No.7 Byatarayanapura	50.00
68	Improvements to roads and drains of Veerannapalya in Ward No.7 Byatarayanapura	75.00
69	Improvements to roads and drains Sanjeevininagara in Ward No.7 Byatarayanapura	75.00
70	Improvements to roads and drains of Amruthahalli colony of Lakshminaraya temple road from Lakshminarayana temple (left side) and in Amruthahalli surrounding areas in Ward No.7 Byatarayanapura	75.00
71	Improvements to Roads and drains of Kodigehalli A.K.Colony in Ward No.8 Kodigehalli	75.00
72	Improvements to Roads and drains of B.B.Nagara in Ward No.8 Kodigehalli	75.00
73	Improvements to Roads and drains of Maruthinagara in Ward No.8 Kodigehalli	50.00
74	Improvements to roads and drains at Thindlu colony, Katteramma temple, Bhovi colony and Kempegowdanagara in Ward No.09, Vidyaranyapura	99.00
75	Construction of RCC drain, cement concrete road and missing covering slabs at Elumandamma Layout and surrounding ara in Ward No.10	99.00
76	Providing cement concrete road, construction of culverts and RCC drains and providing missing covering slabs in Kateramma layout and surrounding areas in Ward No.10	99.00
77	Improvements to Roads and Drains at Kuvempunagara 1st Stage and surrounding area in Ward No.11 Kuvempunagara	99.00
78	Improvements to Roads and Drains at Kuvempunagara 2nd Stage and surrounding area in Ward No.11 Kuvempunagara	99.00
79	Improvements to Roads and Drains at Singapura and surrounding area in Ward No.11 Kuvempunagara	99.00
80	Improvements to Roads and Drains at Ramachandrapura and surrounding area in Ward No.11 Kuvempunagara	99.00
81	Improvements to Roads and Drains at Mariyamma Block and surrounding area in Ward No.11 Kuvempunagara	99.00
82	Improvements to Roads and Drains at Devappa Layout and surrounding area in Ward No.11 Kuvempunagara	99.00
83	Improvements to Roads and Drains at Raghavendra colony and surrounding area in Ward No.11 Kuvempunagara	99.00
84	Improvements to Roads and Drains at Varadarajanagar and surrounding area in Ward No.11 Kuvempunagara	99.00
85	Improvements to Roads and Drains at Vinayakanagara and surrounding area in Ward No.11 Kuvempunagara	99.00
86	Improvements to Roads and Drains at Kuvempunagara 1st stage Mariyamma temple and surrounding area in Ward No.11 Kuvempunagara	99.00

...8.